ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 12–1–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ನಿರಂತರ ಸ್ವಚ್ಚತೆ ಮತ್ತು ಪ್ಲಾಸ್ಟಿಕ್ ಮುಕ್ತ ಆಂದೋಲನ ಆರಂಭೋತ್ಸವ<br><br>ಉದ್ಘಾಟನೆ:<br><br>ಡಾ. ಎನ್. ನಾಗಾಂಬಿಕದೇವಿ, ಪ್ರಧಾನ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ವಾರ್ತಾ ಇಲಾಖೆ.<br><br>ಅಧ್ಯಕ್ಷತೆ:<br><br>ಪ್ರೊ. ಬಿ. ತಿಮ್ಮೇಗೌಡ, ಕುಲಪತಿಗಳು, ಬೆಂಗಳೂರು ವಿಶ್ವ ವಿದ್ಯಾನಿಲಯ | 13–01–2015 ಮಂಗಳವಾರ ಬೆಳಗ್ಗೆ 10–30 ಗಂಟೆಗೆ | ಗೃಹ ವಿಜ್ಞಾನ ಕಾಲೇಜು ಸಭಾಂಗಣ, ಬೆಂಗಳೂರು. |
| 2. | "Delivery of Books Act 1954" ಕುರಿತು ಒಂದು ದಿನದ ಕಾರ್ಯಾಗಾರ.<br><br>ಉದ್ಘಾಟನೆ:<br><br>ಡಾ. ಎಲ್. ಹನುಮಂತಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.<br><br>ವಿಶೇಷ ಉಪನ್ಯಾಸ:<br><br>ಡಾ. ಪಿ.ವೈ.ರಾಜೇಂದ್ರ ಕುಮಾರ್, ಮಹಾ ನಿರ್ದೇಶಕರು, ರಾಷ್ಟ್ರೀಯ | 13–01–2015 ಮಂಗಳವಾರ ಬೆಳಗ್ಗೆ 11–00 ಗಂಟೆಗೆ | ಗ್ರಂಥಾಂಗಣ, ನಗರ ಕೇಂದ್ರ ಗ್ರಂಥಾಲಯ, ಪಶ್ಚಿಮ ವಲಯ, ಆರ್.ಪಿ.ಸಿ. ಲೇಔಟ್, ಹಂಪಿನಗರ, ಬೆಂಗಳೂರು – 560 104 |

| | | | |
|---|---|---|---|
| | ಗ್ರಂಥಾಲಯ, ಕೊಲ್ಕತ್ತಾ | | |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಪ್ಲಾಸ್ಟಿಕ್ ಮುಕ್ತ ಸ್ವಚ್ಚತಾ ಆಂದೋಲನ ಆರಂಭೋತ್ಸವ

ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಸೇವಾ ಯೋಜನೆಯ ಭಾರತ ಸರ್ಕಾರದ ಸ್ವಚ್ಚ ಭಾರತ್ ಅಭಿಯಾನದ ಅಂಗವಾಗಿ ಪ್ಲಾಸ್ಟಿಕ್ ಮುಕ್ತ ಸ್ವಚ್ಚತಾ ಆಂದೋಲನ ಅಭಿಯಾನವನ್ನು ಆರಂಭಿಸಿದೆ. ರಾಜ್ಯದ ಎಲ್ಲಾ 28 ವಿಶ್ವ ವಿದ್ಯಾನಿಲಯ ಮತ್ತು ಕಾಲೇಜುಗಳ ಆವರಣವನ್ನು ನಿರಂತರವಾಗಿ ಸ್ವಚ್ಚವಾಗಿಟ್ಟುಕೊಳ್ಳುವ ಮತ್ತು ಪ್ಲಾಸ್ಟಿಕ್ ಮುಕ್ತಗೊಳಿಸುವ ಉದ್ದೇಶವನ್ನು ಈ ಅಭಿಯಾನ ಹೊಂದಿದೆ. 2015 ರ ಜನವರಿ ಮಾಹೆಯಲ್ಲಿ ವಿಶ್ವವಿದ್ಯಾನಿಲಯ ಮತ್ತು ಕಾಲೇಜುಗಳಲ್ಲಿ ಈ ಬಗ್ಗೆ ಆರಂಭೋತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಮುಂದೆ ನಿರಂತರವಾಗಿ ವಾರಕ್ಕೆ 2 ಗಂಟೆಗಳಷ್ಟು ಕಾಲ ರಾಷ್ಟ್ರೀಯ ಸೇವಾ ಯೋಜನೆಯಡಿ ಸ್ವಯಂಸೇವಕರು ಈ ಕಾರ್ಯಕ್ರಮದಲ್ಲಿ ತೊಡಗಿಕೊಳ್ಳುವ ಕಾರ್ಯ ಯೋಜನೆ ರೂಪಿಸಲಾಗಿದೆ.

ಇದರ ಅಂಗವಾಗಿ ರಾಜ್ಯ ಮಟ್ಟದ ಆರಂಭೋತ್ಸವವನ್ನು ಬೆಂಗಳೂರಿನ ಡಾ. ವಿ.ಎಚ್.ಡಿ. ಗೃಹ ವಿಜ್ಞಾನ ಕಾಲೇಜಿನಲ್ಲಿ ದಿನಾಂಕ 13 ರಂದು ಬೆಳಿಗ್ಗೆ 10-30 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಮತ್ತು ವಾರ್ತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಎನ್. ನಾಗಾಂಬಿಕಾದೇವಿ, ಇವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಬೆಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಬಿ. ತಿಮ್ಮೇಗೌಡ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರಾದ ಶ್ರೀ ಬಿ.ಜಿ. ನಂದಕುಮಾರ್, ರಾಷ್ಟ್ರೀಯ ಸೇವಾ ಯೋಜನೆಯ ಪ್ರಾದೇಶಿಕ ಕೇಂದ್ರದ ಮುಖ್ಯಸ್ಥ ಶ್ರೀ ಎ.ಎನ್. ಪೂಜಾರ್ ಅವರು ಮುಖ್ಯ ಅತಿಥಿಗಳಾಗಿರುತ್ತಾರೆ.

ಪಹೊ:ಬಾಬು:ಜಿಪಿಆರ್.

## ಏಪ್ರಿಲ್ 11 ರಿಂದ 30 ರವರೆಗೆ ರಾಜ್ಯಾದ್ಯಂತ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಸಮೀಕ್ಷಾ ಕಾರ್ಯ

ಬೆಂಗಳೂರು, ಜನವರಿ 12 ( ಕರ್ನಾಟಕ ವಾರ್ತೆ ) :

ಸಮಾನತೆ ಮತ್ತು ಸಾಮಾಜಿಕ ನ್ಯಾಯವನ್ನು ಎಲ್ಲಾ ವರ್ಗದವರಿಗೆ ಎಲ್ಲಾ ಕಾಲದಲ್ಲಿಯೂ ನೀಡುವ ಉದ್ದೇಶದಿಂದ ಏಪ್ರಿಲ್ 11 ರಿಂದ 30 ರವರೆಗೆ ರಾಜ್ಯಾದ್ಯಂತ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ

ಸ್ಥಿತಿಗಳ ಮತ್ತು ಸಮಸ್ಯೆಗಳ ಬಗ್ಗೆ ಸಮೀಕ್ಷೆ ಕಾರ್ಯವನ್ನು ಸರ್ಕಾರ ಹಮ್ಮಿಕೊಂಡಿದೆ ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಹೆಚ್.ಕಾಂತರಾಜು ತಿಳಿಸಿದರು.

ಅವರು ಇಂದು ನಗರದ ಡಿ. ದೇವರಾಜು ಅರಸು ಭವನದಲ್ಲಿ ಏರ್ಪಡಿಸಿದ್ದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015 ಅಪರ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಮತ್ತು ಸಮೀಕ್ಷಾ ಸಂಪನ್ಮೂಲ ವ್ಯಕ್ತಿಗಳ ರಾಜ್ಯಮಟ್ಟದ ಕಾರ್ಯಗಾರದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಸಮುದಾಯಗಳ ಈಗಿರುವ ಸ್ಥಿತಿಗಳಿಗೆ ಸಂಬಂಧಿಸಿದಂತೆ ವೈಜ್ಞಾನಿಕವಾದ ವಿಶ್ಲೇಷಣೆ ನಡೆಸಿ, ಜನಸಂಖ್ಯೆಯ ಪ್ರಮಾಣವನ್ನು ತಿಳಿದು ಗಣತಿಯಲ್ಲಿ ಹೊರಹೊಮ್ಮಿದ ಅಂಶಗಳ ಆಧಾರದಲ್ಲಿ ಅಂತಹ ಸಮುದಾಯಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಾನಮಾನವನ್ನು ಅಧ್ಯಯನ ಮಾಡಿ ಅವರ ಏಳಿಗೆಗೆ ಕಾರ್ಯಕ್ರಮಗಳನ್ನು ರೂಪಿಸಿಸಲಾಗುವುದು ಎಂದರಲ್ಲದೆ ಕಾರ್ಯಗಾರಕ್ಕೆ ಆಗಮಿಸಿರುವ ಜಿಲ್ಲೆಗಳ ಅಪರ ಜಿಲ್ಲಾಧಿಕಾರಿಗಳು, ಉಪ ವಿಭಾಗಧಿಕಾರಿಗಳು ಈ ಸಮೀಕ್ಷೆಯನ್ನು ಉತ್ತಮವಾಗಿ ನಡೆಯುವಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಮಾತನಾಡಿ ಈ ಸಮೀಕ್ಷೆಯು ಕೇವಲ ಹಿಂದುಳಿದ ವರ್ಗಗಳಿಗೆ ಮಾತ್ರವಲ್ಲದೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಾಗೂ ಇತರ ಜಾತಿಗಳನ್ನೊಳಗೊಂಡಿರುತ್ತದೆ. ರಾಜ್ಯದ ಪ್ರತಿಯೊಂದು ಕುಟುಂಬದ ಸಮಗ್ರ ಸಮೀಕ್ಷೆಯನ್ನು ಕೈಗೊಂಡು ವಿವಿಧ ಜಾತಿಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗಳ ಬಗ್ಗೆ ವಿಶ್ಲೇಷಣೆ ಮಾಡಲಾಗುವುದು ಎಂದು ಹೇಳಿದರು.

ಸಮೀಕ್ಷೆಯ ಸಮಯದಲ್ಲಿ ಗಣತಿದಾರರ ಪ್ರಾತ ಮಹತ್ವದ್ದಾಗಿದ್ದು, ಜವಾಬ್ದಾರಿಯುತವಾಗಿ ಮತ್ತು ಕರ್ತವ್ಯ ನಿಷ್ಠೆಯಿಂದ ಕಾರ್ಯ ನಿರ್ವಹಿಸಬೇಕು. ಗಣತಿ ಕಾರ್ಯವನ್ನು ಕೈಗೊಳ್ಳುವ ಮೊದಲು ಗಣತಿದಾರರಿಗೆ ವಹಿಸಲಾಗಿರುವ ಪ್ರದೇಶದ ಹಿರಿಯ ಮತ್ತು ಪ್ರಮುಖ ವ್ಯಕ್ತಿಗಳನ್ನು ಭೇಟಿ ಮಾಡಿ ನಿಕಟ ಸೌಹಾರ್ದತೆಯನ್ನು ಹೊಂದುವಂತೆ ಸಲಹೆ ನೀಡಿದರು.

ಗಣತಿದಾರರಿಗೆ ಎರಡು ಸುತ್ತುಗಳಲ್ಲಿ ತರಬೇತಿಯನ್ನು ನೀಡಲಾಗುವುದು. 2011ನೇ ಜನಗಣತಿ ದಾಖಲೆಗಳಾದ ಪರಿಷ್ಕೃತ ಬ್ಲಾಕ್ ಲೇ ಔಟ್ ಮ್ಯಾಪ್ ಮತ್ತು ಪರಿಷ್ಕೃತ ಮನೆ ಪಟ್ಟಿಗಳನ್ನು ನೀಡಲಾಗುವುದು ಅವುಗಳ ಆಧಾರದ ಮೇಲೆ ಮನೆ-ಮನೆಗೆ ಭೇಟಿ ನೀಡಿ ಸಮೀಕ್ಷೆಯನ್ನು ನಡೆಸುವಂತೆ ಸೂಚಿಸಿದರು.

ರಾಜ್ಯದ ಹಿಂದುಳಿದ ವರ್ಗಗಳ ಆಯೋಗದಿಂದ ಸಂಪನ್ಮೂಲ ವ್ಯಕ್ತಿಯನ್ನು ಪ್ರತಿ ಜಿಲ್ಲೆಗೆ ಒಬ್ಬರಂತೆ ಬಹುತೇಕ ಜಿಲ್ಲೆಗಳಿಗೆ ನೇಮಕ ಮಾಡಿ ನಿಯೋಜಿಸಲಾಗಿದೆ. ಚಿತ್ರದುರ್ಗ, ರಾಯಚೂರು, ಕೊಪ್ಪಳ, ಚಿಕ್ಕಮಗಳೂರು ಮತ್ತು ಬೆಳಗಾಂ ಜಿಲ್ಲೆಗಳಿಗೆ ಅರ್ಹ ನಿವೃತ್ತ ಅಧಿಕಾರಿಗಳು ದೊರೆಯದಿದ್ದ ಕಾರಣ ಜಿಲ್ಲಾಧಿಕಾರಿಗಳ ಹಂತದಲ್ಲೇ ನೇಮಕ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ಜನವರಿ ಅಂತ್ಯದೊಳಗೆ ಜಿಲ್ಲಾಧಿಕಾರಿಗಳು ಅವರ ಜಿಲ್ಲೆಯ ಜಿಲ್ಲಾ ಉಸ್ತುವಾರಿ ಸಚಿವರು, ಸಂಘ ಸಂಸ್ಥೆಗಳೊಂದಿಗೆ ಸಭೆ ನಡೆಸಿ ಸಮೀಕ್ಷೆಯನ್ನು ಯಶಸ್ವಿಯಾಗಿ ನಡೆಯಲು ಅವರ ಸಹಕಾರವನ್ನು ಪಡೆಯುವಂತೆ ತಿಳಿಸಿದರು.

ಸಮೀಕ್ಷೆಯಲ್ಲಿ ಯಾವುದೇ ಪ್ರದೇಶವು ಬಿಟ್ಟು ಹೋಗದಂತೆ ಕ್ರಮವಹಿಸಬೇಕು, ಗಣತಿ ಬ್ಲಾಕ್‌ನಲ್ಲಿರುವ ಎಲ್ಲಾ ಕುಟುಂಬಗಳನ್ನು ಸಮೀಕ್ಷೆ ಮಾಡಿರುವ ಬಗ್ಗೆ ಹಾಗೂ ಯಾವುದೇ ಕುಟುಂಬವು ಪುನರಾವರ್ತನೆ ಆಗದಂತೆ ಖಾತರಿ ಮಾಡಿಕೊಳ್ಳುವಂತೆ ತಿಳಿಸಿದರಲ್ಲೆ ಪ್ರದೇಶದಲ್ಲಿರುವ ವಸತಿ ರಹಿತ ಕುಟುಂಬಗಳ ಗಣತಿಯಿಂದ ಬಿಟ್ಟು ಹೋಗದಂತೆ ದೃಢಪಡಿಸಿಕೊಳ್ಳುವಂತೆ ಸೂಚಿಸಿದರು.

ಸಮೀಕ್ಷೆ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮೂಲಕ ವ್ಯಾಪಕ ಪ್ರಚಾರವನ್ನು ನೀಡಿ ಜನರಲ್ಲಿ ಅರಿವು ಮೂಡಿಸಬೇಕು ಎಂದರಲ್ಲದೆ ಪ್ರತಿ ದಿನ ಸಮೀಕ್ಷೆ ಮುಗಿದ ನಂತರ ಅಪರ ಜಿಲ್ಲಾಧಿಕಾರಿಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮುಖಾಂತರ ಪತ್ರಿಕಾ ಹೇಳಿಕೆಯನ್ನು ಬಿಡುಗಡೆಗೊಳಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವಿಶೇಷಾಧಿಕಾರಿ ಡಿ.ಎನ್. ನಾಯಕ್ ಹಾಗೂ ಆಯೋಗದ ಸದಸ್ಯರು, ಅಪರ ಜಿಲ್ಲಾಧಿಕಾರಿಗಳು, ಉಪ ವಿಭಾಗಧಿಕಾರಿಗಳು, ಮತ್ತು ಸಮೀಕ್ಷಾ ಸಂಪನ್ಮೂಲ ವ್ಯಕ್ತಿಗಳು ಕಾರ್ಯಗಾರದಲ್ಲಿ ಉಪಸ್ಥಿತರಿದ್ದರು.

*ಛಾಯಾಚಿತ್ರ ಶೀರ್ಷಿಕೆ: 4102*

ಏಪ್ರಿಲ್‌ನಲ್ಲಿ ನಡೆಯುವ ರಾಜ್ಯಾದ್ಯಂತ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಸಮೀಕ್ಷೆ ಕಾರ್ಯ ಕುರಿತ ಒಂದು ದಿನದ ಕಾರ್ಯಾಗಾರವನ್ನು ಹಿಂದುಳಿದ ವರ್ಗಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ : ಶಾಲಿನಿ ರಜನೀಶ್ ಅವರು ಇಂದು ಉದ್ಘಾಟಿಸಿದರು.

ಬಾಬು/ಎನ್‌ಎಸ್/ಕೆಎಂ/

## ಫೆಬ್ರವರಿಯಿಂದ ಪ್ರತಿ ತಿಂಗಳ 1 ರಿಂದಲೇ ರಾಜ್ಯಾದ್ಯಂತ ಪಡಿತರ ವಿತರಣೆ

ಬೆಂಗಳೂರು, ಜನವರಿ 12 ( ಕರ್ನಾಟಕ ವಾರ್ತೆ ) :

ಆಹಾರ ದಾನ್ಯಗಳು ಹಾಗೂ ಸೀಮೆ ಎಣ್ಣೆಯನ್ನು ಫೆಬ್ರವರಿ ತಿಂಗಳಿನಿಂದ ನ್ಯಾಯಬೆಲೆ ಅಂಗಡಿಗಳ ಮೂಲಕ ರಾಜ್ಯಾದ್ಯಂತ ಏಕಕಾಲದಲ್ಲಿ ವಿತರಿಸಲಾಗುವುದೆಂದು ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ರಾಜ್ಯ ಸಚಿವ ಶ್ರೀ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಅವರು ವಿಕಾಸ ಸೌದದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡುತ್ತ ಪ್ರಸ್ತುತ ತಿಂಗಳ ಆರಂಭದಲ್ಲಿ ಆಹಾರ ದಾನ್ಯಗಳ ವಿತರಣೆ ಹಾಗೂ 15 ನೇ ತಾರೀಖಿನ ನಂತರ ಸೀಮೆ ಎಣ್ಣೆ ವಿತರಿಸುವ ವ್ಯವಸ್ಥೆ

ಜಾರಿಯಲ್ಲಿದ್ದು ಇನ್ನು ಮುಂದೆ ಫೆಬ್ರವರಿ 1 ನೇ ತಾರೀಖಿನಿಂದಲೇ ಆಹಾರ ಧಾನ್ಯ ಹಾಗೂ ಸೀಮೆ ಎಣ್ಣೆಯನ್ನು ಗ್ರಾಹಕರಿಗೆ ಒಮ್ಮೆಲೆ ವಿತರಿಸಲಾಗುವುದು. ಇದರಿಂದ ಗ್ರಾಹಕರಿಗೆ ಅನುಕೂಲರವಾಗಲಿದೆ ಎಂದರು.

ಕೇಂದ್ರ ಸರ್ಕಾರ ಕಳೆದ ತಿಂಗಳಿನಿಂದ ರಾಜ್ಯಕ್ಕೆ ನೀಡಬೇಕಿದ್ದ ಸೀಮೆ ಎಣ್ಣೆ ಪಾಲಿನಲ್ಲಿ ಶೇಕಡಾ 6.3 ರಷ್ಟು ಖೋತಾ ಮಾಡಿರುವುದರಿಂದ ಇನ್ನೂ ಮುಂದೆ ಗ್ರಾಮೀಣ ಭಾಗದ ಬಿ.ಪಿ.ಎಲ್. ಕಾರ್ಡುದಾರರಿಗೆ 5 ಲೀಟರ್ ಸೀಮೆಎಣ್ಣೆ ಬದಲಿಗೆ 4 ಲೀಟರ್ ಸೀಮೆಎಣ್ಣೆ ವಿತರಿಸಲಾಗುವುದು ಎಂದ ಸಚಿವರು ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದ ಜೊತೆ ಚರ್ಚಿಸದೆ ಹಾಗೂ ಗಮನಕ್ಕೂ ತರದೆ ಏಕಾಏಕಿ ಖೊತಾ ಮಾಡುವ ನಿರ್ಧಾರದಿಂದ ದೇಶದ ಎಲ್ಲ ರಾಜ್ಯಗಳಿಗೆ ತೊಂದರೆಯಾಗುತ್ತದೆ. ಈ ಸಂಬಂಧ ಎಲ್ಲಾ ರಾಜ್ಯಗಳ ಆಹಾರ ಸಚಿವರುಗಳಿಗೆ ಪತ್ರ ಬರೆದು ಕೇಂದ್ರ ಸರ್ಕಾರದ ನಿರ್ಧಾರವನ್ನು ಚರ್ಚಿಸಲಾಗುವುದು. ಅಗತ್ಯ ಬಿದ್ದರೆ ಕೇಂದ್ರಕ್ಕೆ ನಿಯೋಗ ಹೋಗಲು ಚಿಂತಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದ 145 ತಾಲ್ಲೂಕುಗಳಲ್ಲಿ ಆಹಾರ ಧಾನ್ಯ ಸರಬರಾಜಿಗೆ ಸಂಬಂಧಿಸಿದಂತೆ ಕೇಂದ್ರ ಕಛೇರಿಯಿಂದಲೇ ಟೆಂಡರ್ ಕರೆಯಲಾಗಿದ್ದು ಸದರಿ ಸಾಗಾಣಿಕೆ ಟೆಂಡರ್ ವಾಹನಿಗಳಿಗೆದ ಜಿ.ಪಿ.ಎಸ್. ಯಂತ್ರಗಳನ್ನು ಅಳವಡಿಸಿ ಸಾಗಾಣಿಕೆ ವಾಹನಗಳ ಚಲನವಲನ ಹಾಗೂ ಮೇಲ್ವಿಚಾರಣೆಗಳಿಗೆ ಕ್ರಮವಹಿಸಲಾಗಿದೆ ಎಂದ ಸಚಿವರು. ಗೋದಾಮುಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಲಾರಿ ಮಾಲೀಕರು ಕಾರ್ಮಿಕ ವಿಮೆ ಹಾಗೂ ಭವಿಷ್ಯ ನಿಧಿ ನೀಡುವಂತೆ ಈಗಾಗಲೇ ಸೂಚಿಸಲಾಗಿದೆ ಎಂದರು.

ಬಾಬು/ಕೆಪಿಪಿ/ಕೆಎಂ/

ಛಾಯಾಚಿತ್ರ ಶೀರ್ಷಿಕೆ: 4108

ಯುನೈಟೆಡ್ ಕಿಂಗ್‌ಡಂನ ಸೌತ್‌ವಾರ್ಕ್ ನ ಮಾಹಾ ಪೌರ ಶ್ರೀ ಸುನಿಲ್ ಚೋಪ್ರಾ ಅವರು ಇಂದು ರಾಜ್ಯ ಇಂಧನ ಸಚಿವ ಶ್ರೀ ಡಿ.ಕೆ. ಶಿವಕುಮಾರ್ ಅವರನ್ನು ವಿಧಾನ ಸೌಧದ ಸಚಿವರ ಕೊಠಡಿಯಲ್ಲಿ ಭೇಟಿ ಮಾಡಿ ಮಾತುಕತೆ ನಡೆಸಿದರು.